ಓಎಸ್ ನಂ.1-2023

ಡಿ.ಡಬ್ಲ್ಯೂ-2

ದಿನಾಂಕಃ 09-09-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣಿಕರಿಸಲಾಯಿತು.

**ಮುಖ್ಯ ವಿಚಾರಣೆಃ 1 ನೇ ಪ್ರತಿವಾದಿ ಪರ ಶ್ರೀ ಎಸ್ ಆರ್ ಬಿ ವಕೀಲರಿಂದಃ**

1. ನಾನು ಈ ದಾವೆಯಲ್ಲಿ 1 ನೇ ಪ್ರತಿವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಈ ದಿನ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ , ಅದರಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿದ್ದು, ಅವುಗಳನ್ನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ.

2. 3 ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಡಿ-1 ರಿಂದ 3 ಎಂದು , ಹಕ್ಕು ಪತ್ರಿಕೆಯ ನಂ 1369 ದಿಃ 09-04-1948 ರ ಉತಾರ ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-4 ಎಂದು , ದಿಃ 25-08-1955 ರ ಮ್ಯುಟೆಷನ ಎಂಟ್ರಿ ನಂಬರ 1773 ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-5 ಎಂದು ,ಮ್ಯುಟೇಷನ ಎಂಟ್ರಿ ನಂ 3768 ದಿಃ 01-09-2001 ಉತಾರ ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-6 ಎಂದು ,ಹಕ್ಕು ಪತ್ರ ನಮೂನೆ -11 ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-7 ಎಂದು , ನಮೂನೆ -7 (ಎ) ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-8 ಎಂದು ,ಸಹಾಯಕ ಕಮಿಷನರ ಕುಮಟಾ ರವರು ದಿಃ 19-01-2000 ರಂದು ಮಾಡಿದ ಆದೇಶ ದ ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-9 ಎಂದು ,ನಮೂನೆ -11 ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-10 ಎಂದು ,3 ಪಹಣಿ ಪತ್ರಿಕೆ ಗಳು ನಿಡಿ-11 ರಿಂದ 13 ಎಂದು , ನಕ್ಷೆ ದೃಢಿಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-14 ಎಂದು , ಗುರುತಿಸಲಾಯಿತು.

( ಈ ಹಂತದಲ್ಲಿ 1 ನೇ ಪ್ರತಿವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಯಿತು .)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೆ ಸರಿ ಇದೆ.

ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,
ಅಂಕೋಲಾ.